**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**O.S. No. 85/2024**

**ಸಾಕ್ಷಿಯನ್ನು ದಿನಾಂಕಃ 20.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿಗಳ ಪರ ಶ್ರೀ. ಪಿ.ಎನ್.ಜಿ. / ಎನ್.ಡಿ.ಎಂ. ವಕೀಲರಿಂದಃ**

ಈ ದಾವೆಯಲ್ಲಿ ನಾನು **5 ನೇ ವಾದಿಯಾಗಿರುತ್ತೇನೆ**. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣಿಕರಿಸುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನನ್ನ ದಾವೆ ಹಾಗು ಮಧ್ಯಂತರ ಅರ್ಜಿಯ ಜೊತೆ ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ಮಂಜೂರಾತಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-1** ಎಂದು, RR-VI / Index of Land ನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-2** ಎಂದು, 02 ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-3** ಮತ್ತು **ನಿ.ಪಿ.-4** ಎಂದು ಮತ್ತು ಮ್ಯುಟೇಷನ್ ರಿಜಿಸ್ಟರ್ ನ ಆನ್ ಲೈನ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-5** ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ವಾದಿಗಳ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ಸಮಯಾವಕಾಶವನ್ನು ನೀಡಿ ಮುಂದೂಡಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**